<u>**ಕರ್ನಾಟಕ ವಿಧಾನ ಪರಿಷತ್ತು**</u>

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 935
ಸದಸ್ಯರ ಹೆಸರು : ಶ್ರೀ ಯು.ಬಿ.ವೆಂಕಟೇಶ್
(ನಾಮನಿರ್ದೇಶನ ಹೊಂದಿದವರು)

ಉತ್ತರಿಸಬೇಕಾದ ದಿನಾಂಕ : 22.02.2024
ಉತ್ತರಿಸುವ ಸಚಿವರು : ಗೃಹ ಸಚಿವರು

| ಕ್ರ.ಸ. | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದ ಪೊಲೀಸ್ ಠಾಣೆಗಳಲ್ಲಿ ನಡೆಸುತ್ತಿದ್ದ **"ತೆರೆದ ಮನೆ"** (Open House) ಕಾರ್ಯಕ್ರಮಗಳು ಕಳೆದ ಒಂದು ವರ್ಷದಿಂದ ಸ್ಥಗಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | **ರಾಜ್ಯದ ಪೊಲೀಸ್ ಠಾಣೆಗಳಲ್ಲಿ ನಡೆಸುತ್ತಿದ್ದ "ತೆರೆದ ಮನೆ" ಕಾರ್ಯಕ್ರಮಗಳು ಚಾಲ್ತಿಯಲ್ಲಿರುತ್ತದೆ.** ಮಾನ್ಯ ಡಿಜಿಪಿ (ತರಬೇತಿ) ರವರ ಕಛೇರಿ ಪತ್ರ ಸಂಖ್ಯೆ No. SJPU/open house/ 2022-23/61 ದಿನಾಂಕ:24.08.2023 ರಂತೆ ವಿದ್ಯಾರ್ಥಿಗಳೊಂದಿಗೆ ಹಾಗೂ ಸಾರ್ವಜನಿಕರೊಂದಿಗೆ ಪೊಲೀಸರ ಸಂಬಂಧವನ್ನು ಉತ್ತಮಗೊಳಿಸುವ ನಿಟ್ಟಿನಲ್ಲಿ |
| ಆ | ಬಂದಿದ್ದಲ್ಲಿ, ಸದರಿ ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳನ್ನು ಠಾಣೆಗೆ ಕರೆದು ತಂದು ಪೊಲೀಸರ ಕಾರ್ಯವೈಖರಿ ಪರಿಚಯಿಸುವುದು; ಸಂವಾದ ಏರ್ಪಡಿಸುವುದು ಕಾನೂನುಗಳ ಬಗ್ಗೆ ಅರಿವು ಒಳಗೊಂಡ ಜಾಗೃತಿ ಕಾರ್ಯಕ್ರಮವನ್ನು ಸ್ಥಗಿತಗೊಳಿಸಲು ಕಾರಣಗಳೇನು; | ರಾಜ್ಯದ ಠಾಣಾ ಮಟ್ಟದಲ್ಲಿ ಬರುವ ಶಾಲಾ ಮಕ್ಕಳನ್ನು ಠಾಣೆಗೆ ಕರೆತಂದು ಮಕ್ಕಳಿಗೆ ಪೊಲೀಸ್ ಇಲಾಖೆಯ ಬಗ್ಗೆ ಮತ್ತು ಮಕ್ಕಳ ಹಕ್ಕುಗಳು ಹಾಗೂ ಮಕ್ಕಳ ಮೇಲಿನ ದೌರ್ಜನ್ಯಗಳ ತಡೆಗೆ ಅನುಸರಿಸಬೇಕಾದ ರಕ್ಷಣಾತ್ಮಕ ಕ್ರಮಗಳ ಬಗ್ಗೆ ವಿವರವಾದ ಮಾಹಿತಿಯನ್ನು ನೀಡಲಾಗುತ್ತಿದೆ.<br><br>ಮಕ್ಕಳು ಲೈಂಗಿಕ ದೌರ್ಜನ್ಯದಿಂದ ಮಾನಸಿಕವಾಗಿ ಕುಗ್ಗಿ ಆತ್ಮಹತ್ಯೆ ಮಾಡಿಕೊಳ್ಳುವ ಸಂಭವವಿರುವುದರಿಂದ ಶಾಲಾ ಮಕ್ಕಳಿಗೆ (ಗಂಡು ಮತ್ತು ಹೆಣ್ಣು ಮಕ್ಕಳಿಗೆ) "ಸುರಕ್ಷಿತ ಸ್ಪರ್ಶ ಮತ್ತು ಅಸುರಕ್ಷಿತ ಸ್ಪರ್ಶಗಳ (ಗುಡ್ ಟಚ್, ಬ್ಯಾಡ್ ಟಚ್)" ಕುರಿತಂತೆ Animation ಮತ್ತು Videography ಮೂಲಕ ಮಕ್ಕಳಿಗೆ ಅರ್ಥವಾಗುವ ರೀತಿಯಲ್ಲಿ ಅರಿವು ಮೂಡಿಸಲಾಗುತ್ತಿದೆ. |
| ಇ | ಪ್ರಾಥಮಿಕ ಪ್ರೌಢ ಪದವಿಪೂರ್ವ ಹಾಗೂ ಪದವಿ ಕಾಲೇಜುಗಳ ವಿದ್ಯಾರ್ಥಿಗಳಿಗೆ ಪ್ರಯೋಜನವಾಗುವ ಈ ಕಾರ್ಯಕ್ರಮವನ್ನು ಮುಂದುವರೆಸಲು ಕ್ರಮ ವಹಿಸಲಾಗುವುದೇ? | ರಾಜ್ಯದ ಪೊಲೀಸ್ ಠಾಣೆಗಳಲ್ಲಿ ಪ್ರಾಥಮಿಕ ಹಾಗೂ ಪದವಿಪೂರ್ವ ಕಾಲೇಜುಗಳ ವಿದ್ಯಾರ್ಥಿಗಳಿಗೆ ಪ್ರಯೋಜನವಾಗುವ ಈ ಕಾರ್ಯಕ್ರಮವನ್ನು ನಡೆಸಿಕೊಂಡು ಬರಲಾಗುತ್ತಿದೆ. ಅಪ್ರಾಪ್ತ ಮಕ್ಕಳ ಅಪಹರಣ / ಪಲಾಯನ, ಅತ್ಯಾಚಾರ ಹಾಗೂ ಮುಂತಾದ ಅಪರಾಧಗಳ ಕುರಿತಂತೆ ಪೋಷಕರು ನಿರ್ವಹಿಸಬಹುದಾದ ಜವಾಬ್ದಾರಿಯ ಕುರಿತು ಮಾರ್ಗದರ್ಶನ ನೀಡಲಾಗುತ್ತಿದೆ. ಈ ಸಂಬಂಧ ಮಕ್ಕಳ ಪೋಷಕರಿಗೆ, ಸ್ತ್ರೀಶಕ್ತಿ ಸಂಘಟನೆಯ ಮಹಿಳೆಯರಿಗೆ, |

| | | |
|---|---|---|
| | | ಗ್ರಾಮಪಂಚಾಯ್ತಿ ಸದಸ್ಯರಿಗೆ ಹಾಗೂ ಮಕ್ಕಳ ಆರೈಕೆ ಮತ್ತು ಪೋಷಣೆ ಮಾಡುತ್ತಿರುವ ಸಂಬಂಧಪಟ್ಟ ಸಂಸ್ಥೆಯ ಮುಖ್ಯಸ್ಥರುಗಳಿಗೆ ಅರಿವು ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಮೇಲ್ಕಂಡ ಅಪರಾಧಗಳಿಂದ ಮಕ್ಕಳನ್ನು ರಕ್ಷಿಸುವ ಬಗ್ಗೆ ಕ್ರಮ ಕೈಗೊಳ್ಳಲಾಗುತ್ತಿದೆ ಜೊತೆಗೆ ಮಕ್ಕಳಿಗೆ ಸಮಸ್ಯೆಯಾದಲ್ಲಿ ಮಕ್ಕಳ ಸಹಾಯವಾಣಿ–1098, ಪೊಲೀಸ್ ಸಹಾಯವಾಣಿ–112 ನಂಬರ್‌ಗಳಿಗೆ ಕರೆ ಮಾಡುವಂತೆ ಅಲ್ಲದೇ ಮಕ್ಕಳಿಗೆ/ಶಾಲಾ ಶಿಕ್ಷಕರಿಗೆ ಸದರಿ ಸಹಾಯವಾಣಿಗಳ ಕುರಿತಂತೆ ಮಾಹಿತಿ ನೀಡಲಾಗುತ್ತಿದೆ. |

ಹೆಚ್‌ಡಿ 67 ಎಸ್‌ಎಸ್‌ಟಿ 2024

(ಡಾ: ಜಿ.ಪರಮೇಶ್ವರ)
ಗೃಹ ಸಚಿವರು